## ಕರ್ನಾಟಕ ಸರ್ಕಾರದ ನಡಾವಳಿಗಳು

**ವಿಷಯ:-** 2020-2021ನೇ ಸಾಲಿನ ಪ್ರಾಥಮಿಕ ಮತ್ತು ಪ್ರೌಢಶಾಲಾ ಶಿಕ್ಷಕರ ವರ್ಗಾವಣೆ ಪ್ರಕ್ರಿಯೆಯನ್ನು ಮುಂದುವರೆಸುವ - ಆದೇಶ.

**ಓದಲಾಗಿದೆ:** ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಏಕ ಕಡತ ಸಂಖ್ಯೆ:ವರ್ಗ.ಕೋಶ.ರಿ.ನಿ.ತಿದ್ದುಪಡಿ.ಪ್ರ.01/2021-22, ದಿನಾಂಕ:27-05-2021.

**ಪ್ರಸ್ತಾವನೆ:-**

ಮೇಲೆ ಓದಲಾದ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಏಕ ಕಡತದಲ್ಲಿ ದಿನಾಂಕ:24-05-2021ರ ವರ್ಗಾವಣೆಗೆ ಸಂಬಂಧಪಟ್ಟಂತೆ ನಡೆದ ಸಭೆಯಲ್ಲಿ ನೀಡಿದ ಸೂಚನೆಗನುಸಾರ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ಶಿಕ್ಷಕರ ವರ್ಗಾವಣೆ ನಿಯಂತ್ರಣ) ಅಧಿನಿಯಮ 2020ರ ಸೆಕ್ಷನ್ 10ಕ್ಕೆ ದಿನಾಂಕ:29-04-2021ರಲ್ಲಿನ ಆಧ್ಯಾದೇಶದಲ್ಲಿ ಇರುವ ತಿದ್ದುಪಡಿಗನುಸಾರವಾಗಿ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ಶಿಕ್ಷಕರ ವರ್ಗಾವಣೆ ನಿಯಂತ್ರಣ) ಅಧಿನಿಯಮ 2020ಕ್ಕೆ ತಿದ್ದುಪಡಿ ಪ್ರಸ್ತಾಪಿಸಿ, ಕರಡು ನಿಯಮಗಳನ್ನು ಸರ್ಕಾರದ ಅನುಮೋದನೆಗಾಗಿ ಸಲ್ಲಿಸಲಾಗಿರುತ್ತದೆ.

ಅದರಂತೆ ಕರಡು ನಿಯಮಗಳನ್ನು ದಿನಾಂಕ:03-06-2021ರಂದು ರಾಜ್ಯ ಪತ್ರದಲ್ಲಿ ಪ್ರಕಟಿಸಿ, ಆಕ್ಷೇಪಣೆಗಳನ್ನು ಸಲ್ಲಿಸಲು ಏಳು ದಿನಗಳ ಕಾಲ ಕಾಲಾವಕಾಶ ನೀಡಲಾಗಿತ್ತು. ಈ ಸಂಬಂಧ ಸ್ವೀಕೃತವಾದ ಆಕ್ಷೇಪಣೆಗಳಲ್ಲಿ ಯಾವುದೇ ಆಕ್ಷೇಪಣೆ / ಸಲಹೆಗಳನ್ನು ಪರಿಗಣಿಸಲು ಸೂಕ್ತವಾಗಿರುವುದಿಲ್ಲವಾದ್ದರಿಂದ ಕರಡು ಅಧಿಸೂಚನೆಯನ್ನು ಅಂತಿಮಗೊಳಿಸಿ ದಿನಾಂಕ:23-06-2021ರಂದು ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟಿಸಲಾಗಿರುತ್ತದೆ. ಈ ಹಿನ್ನೆಲೆಯಲ್ಲಿ ಪ್ರಸ್ತುತ ತಿದ್ದುಪಡಿ ನಿಯಮಗಳನ್ನು ಒಳಗೊಂಡಂತೆ ಮಾನ್ಯ ಕರ್ನಾಟಕ ಆಡಳಿತ ನ್ಯಾಯಮಂಡಳಿ, ಬೆಂಗಳೂರು ಅರ್ಜಿ ಸಂಖ್ಯೆ:6559-6566/2020 ದಿನಾಂಕ:28/12/2020ರ ಆದೇಶದ ಹಿನ್ನೆಲೆಯಲ್ಲಿ ಸ್ಥಗಿತಗೊಂಡಿದ್ದ 2020-21ನೇ ಸಾಲಿನ ಪ್ರಾಥಮಿಕ ಮತ್ತು ಪ್ರೌಢಶಾಲಾ ಶಿಕ್ಷಕರ ವರ್ಗಾವಣೆ ಪ್ರಕ್ರಿಯೆಯನ್ನು ಮುಂದುವರೆಸಲು ಸರ್ಕಾರವು ತೀರ್ಮಾನಿಸಿ, ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಇಡಿ 35 ಇಟಿಆರ್ 2021 ಬೆಂಗಳೂರು,**

**ದಿನಾಂಕ: 25/06/2021**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ನ್ಯಾಯಾಲಯದ ಆದೇಶದ ಮೇರೆಗೆ ಸ್ಥಗಿತಗೊಂಡಿದ್ದ 2020-2021ನೇ ಸಾಲಿನ ಪ್ರಾಥಮಿಕ ಮತ್ತು ಪ್ರೌಢಶಾಲಾ ಶಿಕ್ಷಕರ ವರ್ಗಾವಣೆಯನ್ನು ಈ

ಕೆಳಕಂಡ ಅಂಶಗಳನ್ನು ಒಳಗೊಂಡಂತೆ ವರ್ಗಾವಣೆ ಪ್ರಕ್ರಿಯೆಯನ್ನು ಮುಂದುವರೆಸಲು ಸರ್ಕಾರದ ಅನುಮತಿ ನೀಡಿ, ಆದೇಶಿಸಿದೆ.

1. ಸ್ಥಗಿತಗೊಂಡಿರುವ 2020-21ನೇ ಸಾಲಿನ ವರ್ಗಾವಣೆಯನ್ನು ಮುಂದುವರೆಸಿ ಹಮ್ಮಿಕೊಳ್ಳುವ ಬಗ್ಗೆ.
2. ಈಗಾಗಲೇ ತಿಳಿಸಿರುವಂತೆ ಹೆಚ್ಚುವರಿ ಮತ್ತು ಕಡ್ಡಾಯ ವರ್ಗಾವಣೆಗಳನ್ನು ಕೈಬಿಡುವುದು.
3. 2020-2021ನೇ ಸಾಲಿನಲ್ಲಿ ತಾಲ್ಲೂಕು ಮತ್ತು ಜಿಲ್ಲೆಯ ಹೊರಗೆ ನಿಯುಕ್ತಿಗೊಂಡಿರುವ ಪ್ರಾಥಮಿಕ ಮತ್ತು ಪ್ರೌಢ (ಕ್ರಮವಾಗಿ) ಶಿಕ್ಷಕರಿಗೆ ಅಧ್ಯಾದೇಶದನುಸಾರ ಮೊದಲ ಆದ್ಯತೆಯ ಕೌನ್ಸಲಿಂಗ್.
4. ಈಗಾಗಲೇ ಸ್ವಿಕೃತವಾಗಿರುವ ಸುಮಾರು 75,000 ಅರ್ಜಿಗಳನ್ನು ಮೊದಲ ಹಂತದಲ್ಲಿ ಕೌನ್ಸಲಿಂಗ್ ಮೂಲಕ ಇತ್ಯರ್ಥಗೊಳಿಸುವುದು. ಹೊಸದಾಗಿ ಅರ್ಜಿ ಸಲ್ಲಿಸಲು ಬಯಸುವ ಶಿಕ್ಷಕರಿಗೂ ಸಹ ಅವಕಾಶವನ್ನು ಕಲ್ಪಿಸಿ, ಎರಡನೇ ಹಂತದ ಕೌನ್ಸಲಿಂಗ್ ನಡೆಸಲು ಕ್ರಮವಹಿಸುವುದು.
5. ಕೌನ್ಸಲಿಂಗ್ ಪ್ರಕ್ರಿಯೆ **'ಶಿಕ್ಷಕ ಮಿತ್ರ'** ಆಪ್ ಮೂಲಕವೇ ಹಮ್ಮಿಕೊಳ್ಳುವುದು ಸಂಪೂರ್ಣ ತಂತ್ರಜ್ಞಾನ ಆಧಾರಿತ ಆಯ್ಕೆಯನ್ನು ನೀಡುವುದು.

ಕರ್ನಾಟಕ ರಾಜ್ಯಪಾಲರು ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ಹೆಚ್.ಎಸ್. ಶಿವಕುಮಾರ್)**
ಸರ್ಕಾರದ ಅಧೀನ ಕಾರ್ಯದರ್ಶಿ,
(ಪ್ರಾಥಮಿಕ ಶಿಕ್ಷಣ) ಶಿಕ್ಷಣ ಇಲಾಖೆ.

ಇವರಿಗೆ:

1. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಹೊಸ ಸಾರ್ವಜನಿಕ ಕಚೇರಿಗಳು, ನೃಪತುಂಗ ರಸ್ತೆ, ಬೆಂಗಳೂರು- 560001
2. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ/ಕಲಬುರಗಿ.
3. ನಿರ್ದೇಶಕರು, (ಪ್ರೌಢ ಶಿಕ್ಷಣ) ಸಾರ್ವಜನಿಕ ಶಿಕ್ಷಣ ಇಲಾಖೆ, ಹೊಸ ಸಾರ್ವಜನಿಕ ಕಚೇರಿಗಳು, ನೃಪತುಂಗ ರಸ್ತೆ, ಬೆಂಗಳೂರು-560001.
4. ನಿರ್ದೇಶಕರು, (ಪ್ರಾಥಮಿಕ ಶಿಕ್ಷಣ) ಸಾರ್ವಜನಿಕ ಶಿಕ್ಷಣ ಇಲಾಖೆ, ಹೊಸ ಸಾರ್ವಜನಿಕ ಕಚೇರಿಗಳು, ನೃಪತುಂಗ ರಸ್ತೆ, ಬೆಂಗಳೂರು-560001.
5. ನಿರ್ದೇಶಕರು, ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿ ಮಲ್ಲೇಶ್ವರಂ, ಬೆಂಗಳೂರು ಹಾಗೂ ಶಿಕ್ಷಕರ ವರ್ಗಾವಣೆ ಸೆಲ್‌ನ ಮುಖ್ಯಸ್ಥರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.

6. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಜಂಟಿ ನಿರ್ದೇಶಕರು ಮತ್ತು ಉಪ ನಿರ್ದೇಶಕರು.

7. ಶಿಕ್ಷಣ ಇಲಾಖೆಯ ಅಪರ ಕಾರ್ಯದರ್ಶಿ/ಉಪ ಕಾರ್ಯದರ್ಶಿ/ಎಲ್ಲಾ ಅಧೀನ ಕಾರ್ಯದರ್ಶಿಗಳು.

8. ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿಗಳು.

--------